ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 14ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹದಿನೈದನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹದಿನೈದನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ (ಆರನೇ ದಿನ).

3. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಶ್ರೀಮಂತ ಬಾಳಸಾಹೇಬ ಪಾಟೀಲ್ ಅವರು** – ರಾಜ್ಯಾದ್ಯಂತ ಹತ್ತು ಹೆಚ್.ಪಿ. ವಿದ್ಯುತ್ ಸಂಪರ್ಕ ಹೊಂದಿರುವ ರೈತರಿಗೆ ಉಚಿತವಾಗಿ ವಿದ್ಯುತ್ ಸರಬರಾಜು ಮಾಡುತ್ತಿರುವ ಮಾದರಿಯಲ್ಲಿಯೇ ಸಾಮೂಹಿಕ ಏತ ನೀರಾವರಿ ಹೊಂದಿರುವ ರೈತರಿಗೂ ಹೈಟೆನ್ಷನ್ ಲೈನ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

2) **ಶ್ರೀ ಕೆ.ಬಿ. ಅಶೋಕ್ ನಾಯ್ಕ್ ಅವರು** – ರಾಜ್ಯದಲ್ಲಿನ ಬಡ ಕುಟುಂಬಗಳಿಗೆ 94(ಡಿ) ಅಡಿಯಲ್ಲಿ ಹಕ್ಕುಪತ್ರ ನೀಡುವುದು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಲಾಭವನ್ನು ದೊರಕಿಸಿ ಕೊಡಲು ಅನುಕೂಲವಾಗುವಂತೆ ಸರ್ಕಾರಿ ಆದೇಶಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ರವೀಂದ್ರ ಶ್ರೀಕಂಠಯ್ಯ ಅವರು** – ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಅರಕೆರೆ ಗ್ರಾಮದಲ್ಲಿರುವ ಸರ್ಕಾರಿ ಶಾಲೆ ಜಾಗವನ್ನು ಸಂರಕ್ಷಿಸಲು ವಿಫಲರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಶಾಲೆಯ ಸುತ್ತ ಕಾಂಪೌಂಡ್ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಕುದುರೆಮುಖ ಅದಿರು ಕಾರ್ಖಾನೆಯು ಸ್ಥಗಿತಗೊಂಡ ನಂತರ ನಶಿಸಿ ಹೋಗುತ್ತಿರುವ ಅಲ್ಲಿನ ಕಟ್ಟಡ ಹಾಗೂ ಮೂಲಭೂತ ಸೌಲಭ್ಯಗಳನ್ನು ಪ್ರವಾಸಿ ಕೇಂದ್ರ ಸ್ಥಾಪನೆಗೆ ಅಥವಾ ಯಾವುದಾದರು ಯೋಜನೆಗೆ ಬಳಸುವ ಮೂಲಕ ಸದ್ಬಳಕೆ ಮಾಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಳೆನರಸೀಪುರ ಪಟ್ಟಣದಲ್ಲಿ ಹಿಂದುಳಿದ ವರ್ಗಕ್ಕೆ ಸೇರಿದ ನಯನಜಕ್ಷತ್ರೀಯ ಸಮಾಜದವರು ನಿರ್ಮಿಸುತ್ತಿರುವ ಸಮುದಾಯ ಭವನದ ನಿರ್ಮಾಣ ಕಾಮಗಾರಿಯು ಪೂರ್ಣಗೊಂಡಿದ್ದು, ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿರುವುದರಿಂದ ಬಾಕಿ ಇರುವ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮುಡಿಪು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಧದಷ್ಟು ಸಿಬ್ಬಂದಿಗಳು ವರ್ಗಾವಣೆಗೊಂಡಿರುವುದರಿಂದ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಸ್.ಆರ್. ಶ್ರೀನಿವಾಸ (ವಾಸು) ಅವರು** – ಗುಬ್ಬಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಅಮ್ಮನಘಟ್ಟ ಗ್ರಾಮದ ರೈತರುಗಳು ವ್ಯವಸಾಯ ಮಾಡುತ್ತಿದ್ದ ಜಮೀನುಗಳು ಅರಣ್ಯ ಇಲಾಖೆಗೆ ಸೇರಿದೆ ಎಂದು ಅಕ್ರಮವಾಗಿ ಪ್ರವೇಶಿಸಿ ಸದರಿ ಜಮೀನಿನಲ್ಲಿ ಫಲವತ್ತಾಗಿ ಬೆಳೆದಿದ್ದ ವಿವಿಧ ಬಗೆಯ ಮರಗಳನ್ನು ತುಂಡರಿಸಿ, ರೈತರ ಮೇಲೆ ಗೂಂಡಾ ವರ್ತನೆ ತೋರಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮತ್ತು ಬಡ ರೈತರಿಗೆ ಸರ್ಕಾರದಿಂದ ನಷ್ಟ ಭರಿಸಿಕೊಡುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

8) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ ಅವರು** – 1998ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಮಾನದನ್ವಯ 2006ರಲ್ಲಿ ಪ್ರಕಟಿಸಲಾದ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ನಂತರ 2014 ಮತ್ತು 2019ರಲ್ಲಿ ಮರುಪ್ರಕಟಿಸಲಾದ ಆಯ್ಕೆ ಪಟ್ಟಿಗಳಲ್ಲಿ ಬದಲಾವಣೆ ಇರುವುದರಿಂದ ನಿವೃತ್ತಿ ಅಂಚಿನಲ್ಲಿರುವ ಅಭ್ಯರ್ಥಿಗಳನ್ನು ಈಗ ಅವರುಗಳು ಕಾರ್ಯನಿರ್ವಹಿಸುತ್ತಿರುವ ಇಲಾಖೆಯಲ್ಲಿಯೇ ಸೂಪರ್‌ನ್ಯೂಮರಿ ಹುದ್ದೆ ಸೃಜಿಸಿ ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9) **ಶ್ರೀಮತಿ ಎಂ. ರೂಪಕಲಾ ಅವರು** – ಕೆ.ಜಿ.ಎಫ್ ಕ್ಷೇತ್ರಕ್ಕೆ ವಿವಿಧ ಯೋಜನೆಗಳಡಿ ನಿಗದಿಪಡಿಸಿದ ವರ್ಷವಾರು, ಯೋಜನೆವಾರು ಗುರಿಯ ಮಾಹಿತಿಯ ಬಗ್ಗೆ ಹಾಗೂ ಉದ್ಯಮಶೀಲತಾ ಯೋಜನೆಯ ಫಲಾನುಭವಿಗಳಿಗೆ ಬ್ಯಾಂಕುಗಳಲ್ಲಿ ಸಾಲ ಮಂಜೂರಿ ಒಪ್ಪಿಗೆ ಪತ್ರ ನೀಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಪಿ. ರಾಜೀವ್ ಅವರು** – ಬೆಳಗಾವಿ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)